# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 27 (84)

ಮಾನ್ಯ ಸದಸ್ಯರ ಹೆಸರು : ಶ್ರೀ ಚಿದಾನಂದ ಎಂ. ಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ :11-08-2025

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ : 41, 589.<br>ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ : 4871<br>(ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ). |
| ಆ) | ರಾಜ್ಯದ ಎಷ್ಟು ಶಾಲೆಗಳ ಮಾಲೀಕತ್ವ/ಖಾತೆಯು ಶಾಲೆ ಅಥವಾ ಶಿಕ್ಷಣ ಇಲಾಖೆಯ ಹೆಸರಿನಲ್ಲಿದೆ (ಜಿಲ್ಲಾವಾರು ವಿವರ ನೀಡುವುದು) | ಒಟ್ಟು 25,339 ಸರ್ಕಾರಿ ಪ್ರಾಥಮಿಕ ಶಾಲೆಗಳ ಮತ್ತು ಒಟ್ಟು 3,297 ಸರ್ಕಾರಿ ಪ್ರೌಢಶಾಲೆಗಳ ಜಾಗಗಳ ಖಾತೆಗಳು ಆಯಾ ಶಾಲೆಯ / ಶಾಲಾ ಶಿಕ್ಷಣ ಇಲಾಖೆಯ / ಸರ್ಕಾರದ ಹೆಸರಿನಲ್ಲಿದೆ.<br>(ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ). |
| ಇ) | ಶಾಲೆ/ಶಿಕ್ಷಣ ಇಲಾಖೆಯ ಮಾಲೀಕತ್ವದಲ್ಲಿ ಇಲ್ಲದ ಶಾಲೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು) | ಒಟ್ಟು 16,250 ಸರ್ಕಾರಿ ಪ್ರಾಥಮಿಕ ಶಾಲೆಗಳ ಮತ್ತು ಒಟ್ಟು 1,574 ಸರ್ಕಾರಿ ಪ್ರೌಢಶಾಲೆಗಳ ಜಾಗಗಳ ಖಾತೆಗಳು ಆಯಾ ಶಾಲೆಯ / ಶಾಲಾ ಶಿಕ್ಷಣ ಇಲಾಖೆಯ / ಸರ್ಕಾರದ ಹೆಸರಿನಲ್ಲಿರುವುದಿಲ್ಲ.<br>(ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ). |
| ಈ) | ಖಾಸಗಿ ಮಾಲೀಕತ್ವ ಅಥವಾ ದಾನಿಗಳ ಹೆಸರಿನಲ್ಲಿರುವ ಶಾಲೆಯ ಖಾತೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು) | |
| ಉ) | ಶಾಲೆಯ ಹೆಸರಿಗೆ ಖಾತಾ ನೋಂದಾಯಿಸಲು ಸರ್ಕಾರ ಅಭಿಯಾನ ಪ್ರಾರಂಭಿಸಲು ಉದ್ದೇಶಿಸಿದೆಯೇ; ಉದ್ದೇಶಿಸಿದ್ದರೆ | ಹೌದು.<br>"ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿ ಸಂರಕ್ಷಣಾ ಅಭಿಯಾನ / ಆಂದೋಲನ" ವನ್ನು ಜುಲೈ-2025 ರಿಂದ ಸೆಪ್ಟೆಂಬರ್-2025 ರವರೆಗಿನ ತ್ರೈಮಾಸಿಕ ಅವಧಿಯಲ್ಲಿ |

| | | |
|---|---|---|
| | ಯಾವ ಕಾಲಮಿತಿಯಲ್ಲಿ ಶಾಲೆ/ಶಿಕ್ಷಣ ಇಲಾಖೆಯ ಹೆಸರಿಗೆ ಖಾತಾ ನೋಂದಾಯಿಸಲಾಗುವುದು? | ಹಮ್ಮಿಕೊಂಡು ಆಯಾ ಸರ್ಕಾರಿ ಶಾಲೆಯ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಜಾಗಗಳನ್ನು ಸದರಿ ಶಾಲೆಯ ಹೆಸರಿನಲ್ಲಿ ಖಾತೆ ಮಾಡಿಸಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಜಿಲ್ಲಾಡಳಿತಗಳಿಗೆ ಹಾಗೂ ಶಾಲಾ ಶಿಕ್ಷಣ ಇಲಾಖೆಯೂ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ತಿಳಿಸಿ ಸುತ್ತೋಲೆ ಹೊರಡಿಸಲಾಗಿದ್ದು, ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |

**ಇಪಿ 77 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಸಚಿವರು

| ಕ್ರ. ಸಂ. | ಜಿಲ್ಲೆಯ ಹೆಸರು | ಜಿಲ್ಲೆಯ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ | | | [illegible] ಶಾಲೆಯ ಹೆಸರಿಗೆ ಆಯಾ ಆಸ್ತಿಯನ್ನು ನೋಂದಾಯಿಸಿರುವ ಶಾಲೆಗಳ ಸಂಖ್ಯೆ | | | ಆಸ್ತಿ ನೋಂದಣಿಗೆ ಬಾಕಿ ಇರುವ ಶಾಲೆಗಳ ಸಂಖ್ಯೆ | | |
|---|---|---|---|---|---|---|---|---|---|---|
| | | ಪ್ರಾಥಮಿಕ | ಪ್ರೌಢ | ಒಟ್ಟು | ಪ್ರಾಥಮಿಕ | ಪ್ರೌಢ | ಒಟ್ಟು | ಪ್ರಾಥಮಿಕ | ಪ್ರೌಢ | ಒಟ್ಟು |
| | ಬೆಂಗಳೂರು ಉತ್ತರ | 474 | 60 | 534 | 262 | 33 | 295 | 212 | 27 | 239 |
| 2 | ಬೆಂಗಳೂರು ದಕ್ಷಿಣ | 840 | 91 | 931 | 538 | 51 | 589 | 302 | 40 | 342 |
| 3 | ಬೆಂಗಳೂರು ಗ್ರಾಮಾಂತರ | 1032 | 64 | 1096 | 915 | 49 | 964 | 117 | 15 | 132 |
| 4 | ಶಿವಮೊಗ್ಗ | 1789 | 164 | 1953 | 753 | 87 | 840 | 1036 | 77 | 1113 |
| 5 | ತುಮಕೂರು | 1935 | 131 | 2066 | 1019 | 88 | 1107 | 916 | 43 | 959 |
| 6 | ಕೋಲಾರ ಕೋಲಾರ | 1744 | 124 | 1868 | 1317 | 94 | 1411 | 427 | 30 | 457 |
| 7 | ರಾಮನಗರ | 1135 | 107 | 1242 | 407 | 58 | 465 | 728 | 49 | 777 |
| 8 | ಮಧುಗಿರಿ | 1220 | 95 | 1315 | 453 | 74 | 527 | 767 | 21 | 788 |
| 9 | ದಾವಣಗೆರೆ | 1059 | 135 | 1194 | 512 | 90 | 602 | 547 | 45 | 592 |
| 10 | ಚಿಕ್ಕಬಳ್ಳಾಪುರ | 1382 | 111 | 1493 | 902 | 72 | 974 | 480 | 39 | 519 |
| 11 | ಚಿತ್ರದುರ್ಗ | 1619 | 115 | 1734 | 830 | 89 | 919 | 789 | 26 | 815 |
| 12 | ಮೈಸೂರು | 1830 | 233 | 2063 | 1379 | 180 | 1559 | 451 | 53 | 504 |
| 13 | ಚಾಮರಾಜನಗರ | 719 | 86 | 805 | 382 | 39 | 421 | 337 | 47 | 384 |
| 14 | ದಕ್ಷಿಣ ಕನ್ನಡ | 892 | 170 | 1062 | 76 | 158 | 234 | 816 | 12 | 828 |
| 15 | ಉಡುಪಿ | 559 | 105 | 664 | 384 | 55 | 439 | 175 | 50 | 225 |
| 16 | ಹಾಸನ | 2120 | 241 | 2361 | 1472 | 185 | 1657 | 648 | 56 | 704 |
| 17 | ಕೊಡಗು | 362 | 47 | 409 | 194 | 25 | 219 | 168 | 22 | 190 |
| 18 | ಮಂಡ್ಯ | 1501 | 215 | 1716 | 706 | 131 | 837 | 795 | 84 | 879 |
| 19 | ಚಿಕ್ಕಮಗಳೂರು | 1256 | 116 | 1372 | 617 | 59 | 676 | 639 | 57 | 696 |
| 20 | ಬಾಗಲಕೋಟೆ | 1239 | 190 | 1429 | 1131 | 171 | 1302 | 108 | 19 | 127 |
| 21 | ಬೆಳಗಾವಿ | 1348 | 137 | 1485 | 1227 | 99 | 1326 | 121 | 38 | 159 |
| 22 | ಚಿಕ್ಕೋಡಿ | 1724 | 194 | 1918 | 1607 | 169 | 1776 | 117 | 25 | 142 |
| 23 | ಧಾರವಾಡ | 734 | 112 | 846 | 386 | 70 | 456 | 348 | 42 | 390 |
| 24 | ಗದಗ | 581 | 115 | 696 | 415 | 84 | 499 | 166 | 31 | 197 |
| 25 | ಹಾವೇರಿ | 1128 | 155 | 1283 | 989 | 122 | 1111 | 139 | 33 | 172 |
| 26 | ಕಾರವಾರ | 915 | 49 | 964 | 257 | 22 | 279 | 658 | 27 | 685 |
| 27 | ಶಿರಸಿ | 1089 | 76 | 1165 | 468 | 39 | 507 | 621 | 37 | 658 |
| 28 | ವಿಜಯಪುರ | 1788 | 161 | 1949 | 1183 | 91 | 1274 | 605 | 70 | 675 |
| 29 | ಬಳ್ಳಾರಿ | 594 | 125 | 719 | 412 | 91 | 503 | 182 | 34 | 216 |
| 30 | ವಿಜಯನಗರ | 926 | 127 | 1053 | 664 | 100 | 764 | 262 | 27 | 289 |
| 31 | ಬೀದರ್ | 1204 | 167 | 1371 | 852 | 119 | 971 | 352 | 48 | 400 |
| 32 | ಕಲುಬುರ್ಗಿ | 1695 | 294 | 1989 | 934 | 154 | 1088 | 761 | 140 | 901 |
| 33 | ಕೊಪ್ಪಳ | 893 | 185 | 1078 | 544 | 120 | 664 | 349 | 65 | 414 |
| 34 | ರಾಯಚೂರು | 1372 | 230 | 1602 | 705 | 154 | 859 | 667 | 76 | 743 |
| 35 | ಯಾದಗಿರಿ | 891 | 144 | 1035 | 447 | 75 | 522 | 444 | 69 | 513 |
| | | 41589 | 4871 | 46460 | 25339 | 3297 | 28636 | 16250 | 1574 | 17824 |

ನಿರ್ದೇಶಕರು
(ಪ್ರಾಥಮಿಕ)

ನಿರ್ದೇಶಕರು
(ಪ್ರೌಢ)

ಕರ್ನಾಟಕ ಸರ್ಕಾರ
# ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು - 560001

**ಸಂಖ್ಯೆ: DPI-CPI0ADM2(OTH)/317/2024/2025-26.** **ದಿನಾಂಕ: 15-07-2025.**
**(ಇ-ಕಡತ ಸಂಖ್ಯೆ: E 1544498).**

## ಸುತ್ತೋಲೆ

**ವಿಷಯ:-** ರಾಜ್ಯದ " ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿ ಸಂರಕ್ಷಣಾ ಅಭಿಯಾನ / ಆಂದೋಲನ "ವನ್ನು ಜುಲೈ - 2025 ರಿಂದ ಸೆಪ್ಟೆಂಬರ್- 2025 ರವರೆಗಿನ ತ್ರೈಮಾಸಿಕ ಅವಧಿಯಲ್ಲಿ ಹಮ್ಮಿಕೊಳ್ಳುವ ಬಗ್ಗೆ.

**ಉಲ್ಲೇಖ:-**1. ಈ ಕಛೇರಿಯ ಸುತ್ತೋಲೆ ಪತ್ರ ಸಂಖ್ಯೆ : ಎಡಿಎಂ02(2)ಕ.ದೂ/76/2016-17/ 22-23 ದಿನಾಂಕ: 02.08.2022, 26.08.2022, 06.10.2022 & 27.11.2023.
2. ಈ ಕಛೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆ ಪತ್ರ ದಿನಾಂಕ: 05.10.2024.
3. ಶ್ರೀಮತಿ ವಿ. ರಶ್ಮಿ ಮಹೇಶ್, ಭಾ.ಆ.ಸೇ., ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಅ.ಸ. ಪತ್ರ ಸಂಖ್ಯೆ: ಇಪಿ 135 ಪಿಜಿಸಿ 2025 ದಿನಾಂಕ: 23.05.2025.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಶಾಲೆಗಳಿಗೆ ಸರ್ಕಾರದಿಂದ ಮಂಜೂರಾಗಿರುವ ಜಾಗಗಳು, ಜಮೀನುಗಳು ಹಾಗೂ ಅನೇಕ ದಾನಿಗಳು, ಶಿಕ್ಷಣ ಪ್ರೇಮಿಗಳು ಸರ್ಕಾರಿ ಶಾಲೆಗಳಿಗೆ ದಾನವಾಗಿ ನೀಡಿರುವ ನಿವೇಶನ, ಜಾಗ, ಜಮೀನು ಆಯಾ ಸರ್ಕಾರಿ ಶಾಲೆಯ ಹೆಸರಿಗೆ ಖಾತೆ ಆಗದೇ ಕೆಲವು ಸಂದರ್ಭಗಳಲ್ಲಿ ಒತ್ತುವರಿಗೊಂಡು, ಅತಿಕ್ರಮಣಗೊಂಡು ಸರ್ಕಾರಿ ಶಾಲಾ ಆಸ್ತಿ ಇತರರ ಪಾಲಾಗುವ ಸಂಭವ ಇರುತ್ತದೆ. ಸರ್ಕಾರಿ ಶಾಲೆಗಳ ಸದರಿ ಆಸ್ತಿಗಳು ಕಾನೂನು ಪ್ರಕಾರ ಆಯಾ ಸರ್ಕಾರಿ ಶಾಲೆಯ ಹೆಸರಿಗೆ ಸಕಾಲದಲ್ಲಿ ಖಾತೆಯಾಗದೇ ಇರುವುದರಿಂದ ಅನೇಕ ಸಂದರ್ಭಗಳಲ್ಲಿ ನ್ಯಾಯಾಲಯದಲ್ಲಿ ಪ್ರಕರಣಗಳು ಸಹ ದಾಖಲಾಗುವ ಸನ್ನಿವೇಶ ನಿರ್ಮಾಣವಾಗುತ್ತದೆ.

ಈಗಿನ ಮತ್ತು ಮುಂದಿನ ಪೀಳಿಗೆಗೆ ಕಡ್ಡಾಯವಾಗಿ ಉಚಿತವಾದ ಹಾಗೂ ಗುಣಮಟ್ಟದ ಶಿಕ್ಷಣವನ್ನು ನೀಡಬೇಕೆನ್ನುವ ಸರ್ಕಾರದ ಆಶಯವನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳ ಜಾಗಗಳನ್ನು ಆಯಾ ಶಾಲೆಯ ಹೆಸರಿಗೆ ಖಾತೆ ಮಾಡಿಸಿ, ಸಂರಕ್ಷಿಸುವುದರ ಮೂಲಕ ಸರ್ಕಾರಿ ಶಾಲೆಗಳನ್ನು ಉಳಿಸಿ, ಬೆಳೆಸುವುದು ವರ್ತಮಾನದ ಪ್ರಥಮ ಆದ್ಯತೆಯಾಗಿರುತ್ತದೆ. ಇದರೊಂದಿಗೆ ಸರ್ಕಾರಿ ಶಾಲಾ ಜಾಗಗಳ ಮಾಲೀಕತ್ವದ ಕುರಿತು ತಕರಾರು, ವಿವಾದ ಮತ್ತು ವ್ಯಾಜ್ಯಗಳು ಉಂಟಾಗುವ ಸಂಭವ ಇರುವುದಿಲ್ಲ.

ಈ ಹಿನ್ನಲೆಯಲ್ಲಿ ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ, ಸರ್ಕಾರಿ ಪ್ರೌಢ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಜಾಗ, ಜಮೀನು, ನಿವೇಶನ ಮತ್ತು ಕಟ್ಟಡಗಳ ಆಸ್ತಿಗಳನ್ನು ಆಯಾ ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಹೆಸರಿಗೆ ಖಾತೆ ಮಾಡಿಸುವುದರ ಮೂಲಕ ಸಂರಕ್ಷಣೆ ಮಾಡಿಕೊಳ್ಳಲು ಸರ್ಕಾರದ ಮತ್ತು ಸಂಬಂಧಿಸಿದ ಇಲಾಖೆಗಳ ನಿರ್ದೇಶನಗಳ ಅನುಸಾರ ಈ ಹಿಂದಿನಿಂದಲೂ ಕ್ರಮವಹಿಸಲಾಗುತ್ತಿದೆ.

ಈ ನಿಟ್ಟಿನಲ್ಲಿ ಉಲ್ಲೇಖ-01 & 02 ರ ಸುತ್ತೋಲೆಗಳಂತೆ ಕಳೆದ ವರ್ಷಗಳಲ್ಲಿ ಸಂಬಂಧಿಸಿದ ಇಲಾಖೆಗಳ ಸಹಯೋಗದಲ್ಲಿ ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿ ಸಂರಕ್ಷಣಾ ಅಭಿಯಾನ /

ಆಂದೋಲನವನ್ನು ಸಹ ನಿರಂತರವಾಗಿ ಕೈಗೊಳ್ಳಲಾಗಿದ್ದು, ರಾಜ್ಯದಾದ್ಯಂತ ಬಹಳಷ್ಟು ಸರ್ಕಾರಿ ಶಾಲೆಗಳ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳನ್ನು ಆಯಾ ಸರ್ಕಾರಿ ಶಾಲೆಯ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಹೆಸರಿನಲ್ಲಿ ಖಾತೆ ಮಾಡಿಸಲು ಕ್ರಮವಹಿಸಲಾಗಿರುತ್ತದೆ. ಬಾಕಿಯಿರುವ ಸರ್ಕಾರಿ ಶಾಲೆಗಳ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳನ್ನು ಆಯಾ ಸರ್ಕಾರಿ ಶಾಲೆಯ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಹೆಸರಿನಲ್ಲಿ ಖಾತೆ ಮಾಡಿಸುವ ಪ್ರಕ್ರಿಯೆ ನಿರಂತರವಾಗಿ ಜಾರಿಯಲ್ಲಿದ್ದು, ಸದರಿ ಪ್ರಕ್ರಿಯೆಯನ್ನು ಚುರುಕುಗೊಳಿಸಿ, ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸಿಕೊಳ್ಳಲು ಮತ್ತೊಮ್ಮೆ ಇಂತಹ ಅಭಿಯಾನವನ್ನು / ಆಂದೋಲನವನ್ನು ಕೈಗೊಳ್ಳುವ ಅಗತ್ಯತೆ ಇರುತ್ತದೆ.

ಆಯಾ ಸರ್ಕಾರಿ ಶಾಲೆಗಳ ಜಾಗಗಳ ದಾಖಲೆಗಳನ್ನು ಸಂಗ್ರಹಿಸಿ ಸದರಿ ಶಾಲೆಯ ಹೆಸರಿಗೆ ಖಾತೆ ಮಾಡಿಸಲು, ಸದರಿ ಜಾಗಗಳು ಒತ್ತುವರಿಯಾಗಿದ್ದಲ್ಲಿ / ಅತಿಕ್ರಮಣವಾಗಿದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರದಿಂದ ಸರ್ವೇ ಮಾಡಿಸಿ ಸದರಿ ಒತ್ತುವರಿಯನ್ನು / ಅತಿಕ್ರಮಣವನ್ನು ತೆರವುಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸುವಂತೆ ಉಲ್ಲೇಖ-03ರ ಅರೆ ಸರ್ಕಾರಿ ಪತ್ರದಲ್ಲಿ ನಿರ್ದೇಶನವಿರುತ್ತದೆ.

ಮೇಲ್ಕಂಡ ಈ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ, ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲೆಗಳು ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ **ಜುಲೈ - 2025 ರಿಂದ ಸೆಪ್ಟೆಂಬರ್- 2025 ರವರೆಗಿನ ತ್ರೈಮಾಸಿಕ ಅವಧಿಯಲ್ಲಿ " ಸರ್ಕಾರಿ ಶಾಲೆ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿ ಸಂರಕ್ಷಣಾ ಅಭಿಯಾನ / ಆಂದೋಲನ "** ವನ್ನು ನಿಯಮಾನುಸಾರ ಕೈಗೊಂಡು, ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಸರ್ಕಾರಿ ಶಾಲೆಗಳ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳನ್ನು ಆಯಾ ಸರ್ಕಾರಿ ಶಾಲೆಯ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಯ ಹೆಸರಿನಲ್ಲಿ ಖಾತೆ ಮಾಡಿಸಲು ಬಾಕಿಯಿರುವ ಪ್ರಕರಣಗಳಲ್ಲಿ, ಸದರಿ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಸರ್ಕಾರಕ್ಕೆ ಯಥಾವತ್ತಾಗಿ ವರದಿ ಮಾಡಲು ಮತ್ತು ಶಾಲಾ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿನ ಯಾವುದಾದರೂ ಸರ್ಕಾರಿ ಶಾಲೆಯ ಅಥವಾ ಸರ್ಕಾರಿ ಶಿಕ್ಷಣ ಸಂಸ್ಥೆಯ ಸ್ಥಿರಾಸ್ತಿ (ಜಾಗ, ಜಮೀನು, ನಿವೇಶನ ಮತ್ತು ಕಟ್ಟಡ) ಒತ್ತುವರಿ ಅಥವಾ ಅತಿಕ್ರಮಣ ಆಗಿದ್ದಲ್ಲಿ, ಅದನ್ನು ತೆರವುಗೊಳಿಸಿ, ಸಂಬಂಧಿಸಿದವರ ಸುಪರ್ದಿಗೆ ನೀಡಲು ಹಾಗೂ ಸದರಿ ಸ್ಥಿರಾಸ್ತಿಗಳನ್ನು ನಿರಂತರವಾಗಿ ಮತ್ತು ಶಾಶ್ವತವಾಗಿ ಸಂರಕ್ಷಿಸಿಕೊಂಡು ಹೋಗಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳನ್ನು ಹಾಗೂ ಜಿಲ್ಲಾಡಳಿತಗಳನ್ನು ಕೋರಲಾಗಿದೆ.

ಈ ಸಂಬಂಧ ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ತಮ್ಮ ವ್ಯಾಪ್ತಿಯಲ್ಲಿನ ಆಯಾ ಸರ್ಕಾರಿ ಶಾಲೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಹೆಸರಿಗೆ ಖಾತೆಯಾಗದಿರುವ ಸದರಿ ಸ್ಥಿರಾಸ್ತಿಗಳ ಖಾತೆಯನ್ನು (ಮುಚ್ಚಿರುವ, ವಿಲೀನಗೊಳಿಸಿರುವ ಮತ್ತು ಸ್ಥಳಾಂತರಿಸಿರುವ ಸರ್ಕಾರಿ ಶಾಲೆಗಳು ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳೂ ಸೇರಿದಂತೆ) ಆಯಾ ಸರ್ಕಾರಿ ಶಾಲೆಯ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಯ ಅಥವಾ ಶಾಲಾ ಶಿಕ್ಷಣ ಇಲಾಖೆಯ ಹೆಸರಿಗೆ ಮಾಡಿಕೊಡಲು ಮತ್ತು ಒಂದು ವೇಳೆ ಸದರಿ ಸ್ಥಿರಾಸ್ತಿಗಳು ಒತ್ತುವರಿ ಅಥವಾ ಅತಿಕ್ರಮಣ ಆಗಿದ್ದಲ್ಲಿ, ಅದನ್ನು ತೆರವುಗೊಳಿಸಲು ತಮ್ಮ ವ್ಯಾಪ್ತಿಯ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾಡಳಿತಕ್ಕೆ ಪ್ರಸ್ತಾವನೆಯನ್ನು ಸಕಾಲದಲ್ಲಿ ಸಲ್ಲಿಸಿ, ಕಂದಾಯ ಇಲಾಖೆ ಹಾಗೂ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, **ಜುಲೈ - 2025 ರಿಂದ ಸೆಪ್ಟೆಂಬರ್- 2025 ರವರೆಗಿನ ತ್ರೈಮಾಸಿಕ ಅವಧಿಯಲ್ಲಿ ಈ ಅಭಿಯಾನ / ಆಂದೋಲನವನ್ನು ಕೈಗೊಳ್ಳುವ ಮೂಲಕ** ಸದರಿ ಪ್ರಕ್ರಿಯೆಯನ್ನು ನಿಯಮಾನುಸಾರ ಪೂರ್ಣಗೊಳಿಸಿಕೊಳ್ಳಲು ಹಾಗೂ ಸದರಿ ಸ್ಥಿರಾಸ್ತಿಗಳನ್ನು ಇಲಾಖೆಯ ಸುಪರ್ದಿಗೆ ಪಡೆದು ನಿರಂತರವಾಗಿ ಮತ್ತು ಶಾಶ್ವತವಾಗಿ ಸಂರಕ್ಷಿಸಿಕೊಂಡು ಹೋಗಲು ಮತ್ತು ಸದರಿ ಸ್ಥಿರಾಸ್ತಿಗಳ ಖಾತೆಗಳ ವಿವರಗಳನ್ನು ಯಥಾವತ್ತಾಗಿ ಶಾಲಾ ಶಿಕ್ಷಣ ಇಲಾಖೆಯ ಸ್ಯಾಟ್ಸ್ (SATS) ತಂತ್ರಾಂಶದಲ್ಲಿ, ಇಂದೀಕರಿಸಲು ನಿಯಮಾನುಸಾರ

ಅಗತ್ಯ ಕ್ರಮಗಳನ್ನು ವಹಿಸುವಂತೆ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ (ಜಿಲ್ಲಾ ಎಸ್ಟೇಟ್ ಅಧಿಕಾರಿ), ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ತಾಲ್ಲೂಕು ಎಸ್ಟೇಟ್ ಅಧಿಕಾರಿ) ಹಾಗೂ ಎಲ್ಲಾ ಸರ್ಕಾರಿ ಶಾಲೆಗಳ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಿಗೆ ತಿಳಿಸಲಾಗಿದೆ.

ಮುಂದುವರೆದು, ಸರ್ಕಾರಿ ಶಾಲೆಗಳ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿಗಳನ್ನು ನಿರಂತರವಾಗಿ ಮತ್ತು ಶಾಶ್ವತವಾಗಿ ಸಂರಕ್ಷಿಸಿಕೊಂಡು ಹೋಗುವ ನಿಟ್ಟಿನಲ್ಲಿ ತಮ್ಮ ಜಿಲ್ಲಾ ವ್ಯಾಪ್ತಿಯೊಳಗೆ ಸುತ್ತುಗೋಡೆ (ಕಾಂಪೌಂಡ್ ವಾಲ್) ಹೊಂದಿಲ್ಲದ ಸರ್ಕಾರಿ ಶಾಲೆಗಳನ್ನು ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ, ಇಂತಹ ಶಾಲೆಗಳ ಸುತ್ತುಗೋಡೆ (ಕಾಂಪೌಂಡ್ ವಾಲ್)ಗಳ ನಿರ್ಮಾಣ ಕಾಮಗಾರಿಗಳನ್ನು ನರೇಗಾ ಯೋಜನೆಯಡಿಯಲ್ಲಿ ಕೈಗೊಳ್ಳಲು ಅನುವಾಗುವಂತೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಆಯಾ ಜಿಲ್ಲಾ ಪಂಚಾಯತಿಗೆ ಸಲ್ಲಿಸಲು ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ತಿಳಿಸಿದೆ.

ಸದರಿ ಕ್ರಿಯಾ ಯೋಜನೆಯನ್ನು ಪ್ರಸಕ್ತ ಸಾಲಿನ ನರೇಗಾ ಯೋಜನೆಯಡಿಯಲ್ಲಿ ಸೇರ್ಪಡೆಗೊಳಿಸಿ, ಈ ಉದ್ದೇಶಕ್ಕಾಗಿ ಕೂಡಲೇ ಅನುದಾನ ಮಂಜೂರು ಮಾಡುವಂತೆ, ಆಯಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಕೋರಲಾಗಿದೆ.

ಈ ಕುರಿತು ನಿರಂತರ ಅನುಪಾಲನೆಯೊಂದಿಗೆ ಅನುದಾನ ಮಂಜೂರು ಮಾಡಿಸಿಕೊಂಡು ದಿನಾಂಕ: 15.12.2025 ರೊಳಗೆ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಿಕೊಳ್ಳಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ಹಾಗೂ ಈ ಕುರಿತಾದ ಮಾಸಿಕ ಪ್ರಗತಿ ವರದಿಯನ್ನು ಈ ಕಛೇರಿಯ ಇ-ಮೇಲ್ ಐಡಿ **ddpiplanning@gmail.com** ಗೆ ತಪ್ಪದೇ ಸಲ್ಲಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ತಿಳಿಸಲಾಗಿದೆ.

ಈ ಸರ್ಕಾರಿ ಶಾಲೆ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಆಸ್ತಿ ಸಂರಕ್ಷಣಾ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಆಯಾ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳನ್ನು ಜಿಲ್ಲಾ ನೋಡಲ್ ಅಧಿಕಾರಿಯನ್ನಾಗಿ ಹಾಗೂ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರನ್ನು ತಾಲ್ಲೂಕು ನೋಡಲ್ ಅಧಿಕಾರಿಯನ್ನಾಗಿ ದಿನಾಂಕ: 27.11.2023 ರ ಉಲ್ಲೇಖ-01ರ ಸುತ್ತೋಲೆಯಂತೆ ಈಗಾಗಲೇ ನೇಮಿಸಲಾಗಿದೆ.

ಸದರಿ ನೋಡಲ್ ಅಧಿಕಾರಿಗಳು ಆಯಾ ಉಪನಿರ್ದೇಶಕರು (ಆಡಳಿತ) ರವರ (ಜಿಲ್ಲಾ ಎಸ್ಟೇಟ್ ಅಧಿಕಾರಿ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ (ತಾಲ್ಲೂಕು ಎಸ್ಟೇಟ್ ಅಧಿಕಾರಿ) ನೇತೃತ್ವದಲ್ಲಿ ಈ ಆಸ್ತಿ ಸಂರಕ್ಷಣಾ & ಸದರಿ ಶಾಲೆಗಳ ಸುತ್ತುಗೋಡೆ (ಕಾಂಪೌಂಡ್ ವಾಲ್)ಗಳ ನಿರ್ಮಾಣ ಕಾಮಗಾರಿಗಳ ಪ್ರಕ್ರಿಯೆಗಳನ್ನು ಕ್ರಮವಾಗಿ ಜಿಲ್ಲೆ ಮತ್ತು ತಾಲ್ಲೂಕು ಹಂತಗಳಲ್ಲಿ ಸಕಾಲದಲ್ಲಿ ಚಾಲನೆಗೊಳಿಸಿ, ಸಂಬಂಧಿಸಿದ ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ನಿರಂತರವಾಗಿ ಹಿಂಬಾಲಿಸಿ ಸಕಾಲದಲ್ಲಿ ಪೂರ್ಣಗೊಳಿಸಿಕೊಳ್ಳಲು ಹಾಗೂ ಯಥಾವತ್ತಾಗಿ ಶಾಲಾ ಶಿಕ್ಷಣ ಇಲಾಖೆಯ ಸ್ಯಾಟ್ಸ್ (SATS) ತಂತ್ರಾಂಶದಲ್ಲಿ ಇಂದೀಕರಿಸಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸತಕ್ಕದ್ದು. ಒಂದು ವೇಳೆ ಈ ಪ್ರಕ್ರಿಯೆಗಳನ್ನು ನಿಗದಿತ ಕಾಲಾವಧಿಯೊಳಗೆ ಪೂರ್ಣಗೊಳಿಸಲು ಶಾಲಾ ಶಿಕ್ಷಣ ಇಲಾಖೆಯ ಸಂಬಂಧಿಸಿದ ಯಾವುದೇ ಅಧಿಕಾರಿಗಳು ವಿಫಲರಾದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮವನ್ನು ಜರುಗಿಸಲಾಗುವುದು ಎಂದು ಎಚ್ಚರಿಸಿದೆ.

ಆಯಾ ಜಿಲ್ಲಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಶಾಲೆಗಳ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಸ್ಥಿರಾಸ್ತಿಗಳ ದಾಖಲೆಗಳ ಯಥಾಪ್ರತಿಗಳನ್ನು ಆಯಾ ಉಪನಿರ್ದೇಶಕರು(ಆಡಳಿತ)ರವರು (ಜಿಲ್ಲಾ ಎಸ್ಟೇಟ್ ಅಧಿಕಾರಿ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿ (ತಾಲ್ಲೂಕು ಎಸ್ಟೇಟ್ ಅಧಿಕಾರಿ) ಗಳೊಂದಿಗೆ ಸದರಿ ನೋಡಲ್ ಅಧಿಕಾರಿಗಳು ಸಹ ಪ್ರತ್ಯೇಕವಾಗಿ, ಶಾಶ್ವತವಾಗಿ ಮತ್ತು ಸುರಕ್ಷಿತವಾಗಿ ಕಾಯ್ದಿರಿಸತಕ್ಕದ್ದು.

ಇದರೊಂದಿಗೆ, ಒಂದು ವೇಳೆ ರಾಜ್ಯದಲ್ಲಿ ಯಾವುದಾದರೂ ಸರ್ಕಾರಿ ಶಾಲೆಯ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಯ ಸ್ಥಿರಾಸ್ತಿಗಳನ್ನು ಶೈಕ್ಷಣಿಕ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳದೇ ಹಾಗೆಯೇ ಬಿಟ್ಟಿದ್ದಲ್ಲಿ ಅಥವಾ ನಿರುಪಯುಕ್ತವಾಗಿದ್ದಲ್ಲಿ, ಸದರಿ ಸ್ಥಿರಾಸ್ತಿಗಳನ್ನು ಶೈಕ್ಷಣಿಕ ಉದ್ದೇಶಕ್ಕೆ ಸದ್ಬಳಕೆ ಮಾಡಿಕೊಳ್ಳಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ಸಹ ಶಾಲಾ ಶಿಕ್ಷಣ ಇಲಾಖೆಯ ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸರ್ಕಾರಿ ಶಾಲೆಗಳ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರಿಗೆ ಮತ್ತೊಮ್ಮೆ ತಿಳಿಸಿದೆ.

ಡಾ|| ಕೆ.ವಿ ತ್ರಿಲೋಕ್ ಚಂದ್ರ, ಭಾ.ಆ.ಸೇ
ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ ಇವರುಗಳಿಗೆ ಕಳುಹಿಸುತ್ತಾ, ತಮ್ಮ ವ್ಯಾಪ್ತಿಯ ಸರ್ಕಾರಿ ಶಾಲೆಗಳ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳ ಪ್ರಕರಣಗಳಲ್ಲಿ, ಮೇಲ್ಕಂಡ ಪ್ರಕ್ರಿಯೆಯನ್ನು ಹಿಂಬಾಲಿಸಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿಕೊಳ್ಳಲು ತಿಳಿಸಿದೆ.
4. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಸರ್ಕಾರಿ ಪ್ರೌಢ ಶಾಲೆಗಳ ಪ್ರಕರಣಗಳಲ್ಲಿ, ಮೇಲ್ಕಂಡ ಪ್ರಕ್ರಿಯೆಯನ್ನು ಹಿಂಬಾಲಿಸಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿಕೊಳ್ಳಲು ತಿಳಿಸಿದೆ.
5. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, 100 ಅಡಿ ಹೊರ ವರ್ತುಲ ರಸ್ತೆ, ಬನಶಂಕರಿ 3 ನೇ ಹಂತ, ಬಂಗಳೂರು ಇವರಿಗೆ ಕಳುಹಿಸುತ್ತಾ, ಸರ್ಕಾರಿ ಶಿಕ್ಷಣ ಸಂಸ್ಥೆಗಳ (ಸಿ.ಟಿ.ಇ., ಡಯಟ್, ಟಿ.ಟಿ.ಐ. ಇತ್ಯಾದಿ...) ಪ್ರಕರಣಗಳಲ್ಲಿ, ಮೇಲ್ಕಂಡ ಪ್ರಕ್ರಿಯೆಯನ್ನು ಹಿಂಬಾಲಿಸಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿಕೊಳ್ಳಲು ತಿಳಿಸಿದೆ.
6. ಸಹ ನಿರ್ದೇಶಕರು(ಶಾಲಾ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ರಾಜ್ಯದ ಎಲ್ಲಾ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ (ಸಿ.ಟಿ.ಇ.)ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಸಹನಿರ್ದೇಶಕರಿಗೆ.
8. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರಿಗೆ.
9. ರಾಜ್ಯದ ಎಲ್ಲಾ ಡಯಟ್‌ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
10. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳಿಗೆ [ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ).
11. ಉಪನಿರ್ದೇಶಕರು, ಯೋಜನೆ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
12. ಹಿರಿಯ ಸಹಾಯಕ ನಿರ್ದೇಶಕರು(ಸ್ಯಾಟ್ಸ್), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಸ್ಯಾಟ್ಸ್ ತಂತ್ರಾಂಶದಲ್ಲಿ ಸದರಿ ವಿವರಗಳನ್ನು ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆಡಳಿತ)ರವರು ಇಂದೀಕರಿಸಲು ಅವಕಾಶ ಕಲ್ಪಿಸಿರುವ ಬಗ್ಗೆ ಮತ್ತೊಮ್ಮೆ ಖಚಿತಪಡಿಸಿಕೊಳ್ಳಲು ತಿಳಿಸಿದೆ.

13. ಹಿರಿಯ ಸಹಾಯಕ ನಿರ್ದೇಶಕರು(ಇ-ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಈ ಸುತ್ತೋಲೆಯನ್ನು ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
14. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯಾ ಉಪನಿರ್ದೇಶಕರು(ಆಡಳಿತ) ರವರ ಮೂಲಕ).
15. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
16. ರಾಜ್ಯದ ಎಲ್ಲಾ ಶಿಕ್ಷಕರ ತರಬೇತಿ ಕೇಂದ್ರಗಳ (ಟಿ.ಟಿ.ಇ.) ಪ್ರಾಂಶುಪಾಲರಿಗೆ.
17. ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಕಂದಾಯ ಇಲಾಖೆ), 5 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ
3. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
5. ಆಯುಕ್ತರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ನಿರ್ದೇಶಕರು, ಭೂಮಿ ಮತ್ತು ಯು.ಪಿ.ಓ.ಆರ್. ಕೆ.ಆರ್.ವೃತ್ತ, ಬೆಂಗಳೂರು.
6. ಆಯುಕ್ತರು, ಪಂಚಾಯತಿ ರಾಜ್ ನಿರ್ದೇಶನಾಲಯ, ಕಾಳಿದಾಸ ಮಾರ್ಗ, ಗಾಂಧಿ ನಗರ, ಬೆಂಗಳೂರು.
7. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು / ಮೈಸೂರು / ಬೆಳಗಾವಿ / ಕಲಬುರ್ಗಿ.
9. ನಿರ್ದೇಶಕರು, ಉರ್ದು & ಇತರ ಅಲ್ಪ ಸಂಖ್ಯಾತ ಭಾಷಾ ಶಾಲೆಗಳು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 9 & 10 ನೇ ಮಹಡಿ, ಸರ್.ಎಂ.ವಿಶ್ವೇಶ್ವರಯ್ಯ ಗೋಪುರ, ಡಾ|| ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560 001.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ, 2 ನೇ ಮಹಡಿ, ಜಿಲ್ಲಾಧಿಕಾರಿಗಳ ಕಛೇರಿ ಕಟ್ಟಡ, ಕಂದಾಯ ಭವನದ ಹಿಂಭಾಗ, ಕೆಂಪೇಗೌಡ ರಸ್ತೆ, ಬೆಂಗಳೂರು-560 009.
12. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರಿಗೆ.
13. ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳಿಗೆ (ಆಯಾ ಜಿಲ್ಲಾಧಿಕಾರಿಗಳ ಕಛೇರಿ ಮೂಲಕ).
14. ರಾಜ್ಯದ ಎಲ್ಲಾ ತಹಶೀಲ್ದಾರ್‌ಗಳಿಗೆ (ಆಯಾ ಜಿಲ್ಲಾಧಿಕಾರಿಗಳ ಕಛೇರಿ ಮೂಲಕ).
15. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಹಣಾಧಿಕಾರಿಗಳಿಗೆ (ಆಯಾ ಜಿಲ್ಲಾ ಪಂಚಾಯತಿಯ ಮೂಲಕ).
16. ಕಛೇರಿ ಪ್ರತಿ.